**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 157 ಟಿಎನ್ ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:05-02-2021.

**ಆದೇಶ**

ಬೆಂಗಳೂರು ನಗರದಲ್ಲಿ ಕೋವಿಡ್-19 ವೈರಾಣು ಸೋಂಕು ಹರಡುವಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿರ್ವಹಣಾ ಕ್ರಮಗಳ ಮೇಲ್ವಿಚಾರಣೆ ಮಾಡಲು ಮತ್ತು ಪರಿಶೀಲಿಸಲು ಹಾಗೂ ತಕ್ಷಣ ನಿರ್ಧಾರಗಳನ್ನು ಕೈಗೊಳ್ಳಲು ಆದೇಶ ಸಂಖ್ಯೆ: ಕಂಇ 157 ಟಿಎನ್ಆರ್ 2020, ದಿನಾಂಕ:09.07.2020 ಮತ್ತು ದಿನಾಂಕ:06.10.2020ರಲ್ಲಿ ಹಿರಿಯ ಐ.ಎ.ಎಸ್. ಅಧಿಕಾರಿಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಲಯ ಸಂಯೋಜಕರನ್ನಾಗಿ ನೇಮಿಸಲಾಗಿರುವುದನ್ನು ಈ ಕೂಡಲೇ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ.

ಮುಂದುವರೆದು, ಬೆಂಗಳೂರು ನಗರದಲ್ಲಿ ಕೋವಿಡ್-19 ವೈರಾಣು ಸೋಂಕು ಹರಡುವಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿರ್ವಹಣಾ ಕ್ರಮಗಳ ಮೇಲ್ವಿಚಾರಣೆ ಮಾಡಲು ಮತ್ತು ಕೋವಿಡ್-19 ವೈರಾಣು ಸೋಂಕು ನಿಗಾವಣೆ, ನಿಯಂತ್ರಣ, ಜಾಗ್ರತೆಗೆ ಸಂಬಂಧಿಸಿದ ಮಾರ್ಗಸೂಚಿಗಳನ್ನು ಅನುಷ್ಠಾನಗೊಳಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಂಬಂಧಿಸಿದ ವಲಯಗಳ ಜಂಟಿ ಆಯುಕ್ತರನ್ನು ವಲಯ ಸಂಯೋಜಕರನ್ನಾಗಿ ನೇಮಿಸಿ ಆದೇಶಿಸಿದೆ.

*(ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಂದ
ಅನುಮೋದಿತ)*

**(ಅಂಜುಂ ಪರ್ವೇಜ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ
ವಿಪತ್ತು ನಿರ್ವಹಣಾ ಪ್ರಾಧಿಕಾರದ
ಕಾರ್ಯಕಾರಿ ಸಮಿತಿ

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

**ಪ್ರತಿ:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
4) ರಾಜ್ಯ ಕಾರ್ಯಕಾರಿ ಸಮಿತಿಯ ಎಲ್ಲಾ ಸದಸ್ಯರು,
5) ಎಲ್ಲಾ ವಲಯ ಸಂಯೋಜಕರು.
6) ಎಲ್ಲಾ ವಲಯಗಳ ಜಂಟಿ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7) ಸರ್ಕಾರದ ಮುಖ್ಯ ಕಾರ್ಯದರ್ಶಿಗಳ, ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8) ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.